ಕ-2

17-05-23

ಕರ್ನಾಟಕ ಸರ್ಕಾರದ ನಡವಳಿಗಳು

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರ ಆಪ್ತ ಶಾಖೆ.
ಸಂಖ್ಯೆ 80 ಒದಲಾಗಿದೆ
ದಿನಾಂಕ

18/05/2023
CAO/ Addl. Dir.

ಅನುದಾನಿತ ಪದವಿ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕ ಹುದ್ದೆಯ ನೇಮಕಾತಿಗೆ ವಯೋಮಿತಿಯನ್ನು ಹೆಚ್ಚಿಸುವ ಬಗ್ಗೆ.

1. ಸರ್ಕಾರದ ಇ-ಕಡತ ಸಂಖ್ಯೆ:ಇಡಿ 159 ಯುಪಿಸಿ 2022 ರಲ್ಲಿನ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರ ಅಭಿಪ್ರಾಯದನ್ವಯ.
2. ಸರ್ಕಾರಿ ಆದೇಶ ಸಂಖ್ಯೆ: ಇಡಿ 49 ಯುಪಿಸಿ 2018 ದಿನಾಂಕ: 20.06.2018.
3. ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ ಇಡಿ 87 ಯುಪಿಸಿ 2016 ದಿನಾಂಕ: 13.12.2018.
4. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು-1) ಇವರ ಟಿಪ್ಪಣಿ ಸಂಖ್ಯೆ:ಸಿಆಸುಇ 80 ಸೇನಿಪ 2023, ದಿನಾಂಕ:12-04-2023.

ಪ್ರಸ್ತಾವನೆ:

ವಿವಿಧ ಶಾಸಕರುಗಳು ಹಾಗೂ ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಯವರಿಂದ ಸ್ವೀಕೃತವಾದ ಮನವಿ/ಟಿಪ್ಪಣಿಗಳಲ್ಲಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಮಾಡಿಕೊಳ್ಳಲು ಅನುಮತಿ ನೀಡಿದ ಹಿನ್ನಲೆಯಲ್ಲಿ ವಿದ್ಯಾರ್ಹತೆ ಹೊಂದಿ ಅನೇಕ ಪದವೀಧರರು ಒಂದೇ ಸಂಸ್ಥೆಯಲ್ಲಿ ಸುಮಾರು 15 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ. ಸಾಂಕ್ರಾಮಿಕ ರೋಗ ಕೋವಿಡ್-19 ನಿಮಿತ್ತ ಅವರ ವಯಸ್ಸು ಮೀರುತ್ತಿರುವುದರಿಂದ ಅಂತವರಿಗೆ ಅನ್ಯಾಯವಾಗುತ್ತಿರುವುದು ಕಂಡುಬಂದಿದೆ. ಈಗಾಗಲೇ ಸರ್ಕಾರವು ಪ್ರೌಢಶಾಲೆ, ಪದವಿ ಪೂರ್ವ ಕಾಲೇಜು ಬೋಧಕ ಮತ್ತು ಪೊಲೀಸ್ ಇಲಾಖೆಯ ನೇಮಕಾತಿಯಲ್ಲಿ ವಯೋಮಿತಿಯನ್ನು ಹೆಚ್ಚಿಸಲಾಗಿದೆ. ಈ ಹಿನ್ನಲೆಯಲ್ಲಿ ಪ್ರಸ್ತುತ ನೇಮಕಾತಿಯಲ್ಲಿ ನಿಗಧಿಪಡಿಸಿರುವ ವಯೋಮಿತಿಯನ್ನು ದಿನಾಂಕ:31-12-2015ರ ಒಳಗಿನ ಸಹಾಯಕ ಪ್ರಾಧ್ಯಾಪಕರ ನೇಮಕಾತಿಗೂ ಒಂದು ಬಾರಿ ವಿಸ್ತರಿಸಿ ಎಲ್ಲಾ ಅಭ್ಯರ್ಥಿಗಳಿಗೆ ತಲಾ 2 ವರ್ಷ ಸಡಿಲಿಕೆ ನೀಡಿ ಆದೇಶ ನೀಡುವಂತೆ ಕೋರಿದ್ದರ ಹಿನ್ನಲೆಯಲ್ಲಿ, ಈ ಬಗ್ಗೆ ಪರಿಶೀಲಿಸಿ ಅಭಿಪ್ರಾಯವನ್ನು ಸಲ್ಲಿಸುವಂತೆ ಆಯುಕ್ತರನ್ನು ಕೋರಲಾಗಿರುತ್ತದೆ.

ಅದರಂತೆ, ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆಯುಕ್ತಾಲಯದ ಅಭಿಪ್ರಾಯದಲ್ಲಿ ಸರ್ಕಾರದ ಆದೇಶ ಸಂಖ್ಯೆ:ಇಡಿ/49/ಯುಪಿಸಿ/2015, ದಿನಾಂಕ:20.06.2018 ಸರ್ಕಾರದ ಆದೇಶ ಸಂಖ್ಯೆ:ಇಡಿ/87/ಯುಪಿಸಿ/2016, ದಿ:13.12.2018 ರಂತೆ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿನ ಬೋಧಕರ ನೇಮಕಾತಿಗೆ ಅಭ್ಯರ್ಥಿಗಳ ಗರಿಷ್ಠ ವಯೋಮಿತಿಯನ್ನು ಪರಿಗಣಿಸಲಾಗಿದೆ. ಆದಾಗ್ಯೂ ಈ ಬಗ್ಗೆ ಸರ್ಕಾರದ ಹಂತದಲ್ಲಿ ಕ್ರಮ ಕೈಗೊಳ್ಳಬಹುದಾಗಿರುತ್ತದೆ ಎಂಬ ಅಭಿಪ್ರಾಯದೊಂದಿಗೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರಿ ಆದೇಶ ಸಂಖ್ಯೆ: ಇಡಿ 49 ಯುಪಿಸಿ 2018 ದಿನಾಂಕ: 20.06.2018 ರನ್ವಯ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ದಿನಾಂಕ: 31.12.2015 ರೊಳಗೆ ಖಾಲಿ ಆಗಿರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇರ ನೇಮಕಾತಿಗಾಗಿ ಅಭ್ಯರ್ಥಿಗಳ ಗರಿಷ್ಠ ವಯೋಮಿತಿಯನ್ನು ಸಾಮಾನ್ಯ ಅಭ್ಯರ್ಥಿಗಳಿಗೆ 40 ವರ್ಷಗಳು, ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-II(a),II(b), III(a) ಮತ್ತು III(b) ಗಳಿಗೆ 43

ವರ್ಷಗಳು ಮತ್ತು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ 45 ವರ್ಷಗಳೆಂದು ನಿಗಧಿಪಡಿಸಲಾಗಿರುತ್ತದೆ

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ ಇಡಿ 87 ಯುಪಿಸಿ 2016 ದಿನಾಂಕ: 13.12.2018 ರನ್ವಯ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಪೂರ್ಣಕಾಲಿಕ ಬೋಧನಾನುಭವ ಹೊಂದಿರುವ ಅಭ್ಯರ್ಥಿಗಳಿಗೆ ಮೇಲಿನಂತೆ ಗರಿಷ್ಠ ವಯೋಮಿತಿಯನ್ನು ನಿಗಧಿಪಡಿಸುವುದರೊಂದಿಗೆ ಅವರು ಬೋಧನಾನುಭವ ಹೊಂದಿರುವ ಸೇವಾವಧಿ ಅಥವಾ 5 ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ಅವಧಿಗೆ ಗರಿಷ್ಠ ವಯೋಮಿತಿಯಲ್ಲಿ ವಿನಾಯಿತಿ ನೀಡಲು ಸರ್ಕಾರದ ಅನುಮತಿ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು-1)ಯು ಈ ಕೆಳಕಂಡಂತೆ ಅಭಿಪ್ರಾಯ ನೀಡಿದೆ.

> "ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಉಪನ್ಯಾಸಕರ ನೇರ ನೇಮಕಾತಿಗೆ ದಿನಾಂಕ:23-06-2022 ರಿಂದ ಒಂದು ವರ್ಷದ ಅವಧಿಗೆ ಮಾತ್ರ ಗರಿಷ್ಠ ವಯೋಮಿತಿಯಲ್ಲಿ ಎರಡು ವರ್ಷಗಳ ಸಡಿಲಿಕೆಯ ಮಾನದಂಡವು ಮೊದಲ ನೇರ ನೇಮಕಾತಿಗೆ ಮಾತ್ರ ಅನ್ವಯವಾಗುವ ಪ್ರಸ್ತಾವನೆಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು)ಯು ಸಹಮತಿಸುತ್ತದೆ ಎಂದು ತಿಳಿಸಲಾಗಿದೆ."

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ ಪರಿಶೀಲಿಸಿ, ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ನೇಮಕಾತಿಯನ್ನು ಕೋವಿಡ್ -19 ಸಾಂಕ್ರಾಮಿಕ ರೋಗದ ಹಿನ್ನಲೆಯಲ್ಲಿ ಎರಡು ವರ್ಷಗಳವರೆಗೆ ತಡೆಹಿಡಿದಿದ್ದರಿಂದ ಎರಡು ವರ್ಷಗಳಿಗೆ ಮಾತ್ರ ಹೆಚ್ಚಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 159 ಯುಪಿಸಿ 2022**

**ಬೆಂಗಳೂರು, ದಿನಾಂಕ:18-05-2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇಮಕಾತಿಗೆ ಸರ್ಕಾರದ ಆದೇಶ ಸಂಖ್ಯೆ:ಇಡಿ 49 ಯುಪಿಸಿ/2015, ದಿನಾಂಕ:20.06.2018 ಮತ್ತು ಸರ್ಕಾರದ ಆದೇಶ ಸಂಖ್ಯೆ: ಇಡಿ 87 ಯುಪಿಸಿ 2016, ದಿ:13.12.2018 ರಂತೆ ನಿಗಧಿಪಡಿಸಿರುವ ಗರಿಷ್ಠ ವಯೋಮಿತಿಯೊಂದಿಗೆ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ನೇಮಕಾತಿಯನ್ನು ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನಲೆಯಲ್ಲಿ ಎರಡು ವರ್ಷಗಳವರೆಗೆ ತಡೆಹಿಡಿದಿದ್ದರಿಂದ ಒಂದು ಬಾರಿಗೆ ಮಾತ್ರ ದಿನಾಂಕ:23-06-2022 ರಿಂದ ಒಂದು ವರ್ಷದ ಅವಧಿಗೆ ಮಾತ್ರ ಗರಿಷ್ಠ ವಯೋಮಿತಿಯಲ್ಲಿ ಎರಡು ವರ್ಷಗಳ ಸಡಿಲಿಕೆಯ ಮಾನದಂಡವು ಮೊದಲ ನೇರ ನೇಮಕಾತಿಗೆ ಮಾತ್ರ ಅನ್ವಯವಾಗುವಂತೆ ಗರಿಷ್ಠ ವಯೋಮಿತಿಯನ್ನು ಎರಡು ವರ್ಷಗಳಿಗೆ ಮಾತ್ರ ಹೆಚ್ಚಿಸಿ ಆದೇಶಿಸಲಾಗಿದೆ.

ಈ ಆದೇಶವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಸೇವಾ ನಿಯಮಗಳು-1) ಅವರ ಟಿಪ್ಪಣಿ ಸಂಖ್ಯೆ: ಸಿಆಸುಇ 80 ಸೇನಿಐ 2023, ದಿನಾಂಕ:12-04-2023 ರ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ. ಧನಂಜಯ) 18/5
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ)

---

ಸಂಖ್ಯೆ:ಕಾಶಿಇ/ಇತರೆ/158/2016-17/ನೇವಿ-2

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:23.05.2023.

ಮೇಲ್ಕಾಣಿಸಿದ ಸರ್ಕಾರದ ಆದೇಶವನ್ನು ಈ ಕೆಳಕಂಡವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಲಾಗಿದೆ.

**ಇವರಿಗೆ,**

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಶಿವಮೊಗ್ಗ, ಕಲಬುರಗಿ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ,
2. ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಖಾಸಗಿ ಅನುದಾನಿತ ಕಾಲೇಜುಗಳ ಆಡಳಿತ ಮಂಡಳಿ ಹಾಗೂ ಪ್ರಾಂಶುಪಾಲರುಗಳಿಗೆ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ,

**ಪ್ರತಿ ರವಾನೆ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು, ಬೆಂಗಳೂರು.
2. ಮಾಹಿತಿ ಅಧಿಕಾರಿಗಳು, ಕಾಲೇಜು ಶಿಕ್ಷಣ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು-ಚಲನಾ ಆದೇಶವನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಸೂಚಿಸಲಾಗಿದೆ.
3. ರಕ್ಷಕ ಕಡತ
4. ಕಛೇರಿ ಪ್ರತಿ.

**ಹೆಚ್ಚುವರಿ ನಿರ್ದೇಶಕರು**
**ಕಾಲೇಜು ಶಿಕ್ಷಣ ಇಲಾಖೆ**

ರವಾನಿಸಲಾಗಿದೆ